# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ:: ಶ್ರೀ ಹಾಲಸಿದ್ಧನಾಥ ಸಹಕಾರಿ ಸಕ್ಕರೆ ಕಾರ್ಖಾನೆ ಲಿಮಿಟೆಡ್ ರವರಿಗೆ (M/s Shri Halasidhanath Shakari Sakhar Karkhana Ltd) ಇವರಿಗೆ 15 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ನಿರಾಕ್ಷೇಪಣಾ ಪತ್ರ ನೀಡುವ ಕುರಿತು.

ಓದಲಾಗಿದೆ: 1. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಆದೇಶ ಸಂಖ್ಯೆ : ವಾಕೈ 16 ಎಸ್‌ಜಿಎಫ್ 2013 ದಿನಾಂಕ :08.02.2013.

2) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿಎಲ್/04/F-92/2013-14/339 ದಿನಾಂಕ: 04/07.02.2014.

* * *

**ಪ್ರಸ್ತಾವನೆ: –**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಮೆ:: ಶ್ರೀ ಹಾಲಸಿದ್ಧನಾಥ ಸಹಕಾರಿ ಸಕ್ಕರೆ ಕಾರ್ಖಾನೆ ಲಿಮಿಟೆಡ್ ಇವರಿಗೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಶಂಕರನಂದನಗರ್, ನಿಪ್ಪಾಣಿಯಲ್ಲಿ ಮಂಜೂರಾಗಿರುವ 1250 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯ ಸಾಮರ್ಥ್ಯವನ್ನು 3500 ಟಿಸಿಡಿ ಗೆ ಹೆಚ್ಚಿಸಲು ಹಾಗೂ 20 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯು ಅನುಮೋದನೆ ನೀಡಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ:: ಶ್ರೀ ಹಾಲಸಿದ್ಧನಾಥ ಸಹಕಾರಿ ಸಕ್ಕರೆ ಕಾರ್ಖಾನೆ ಲಿಮಿಟೆಡ್ ರವರ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಶಂಕರನಂದನಗರ್, ನಿಪ್ಪಾಣಿಯಲ್ಲಿರುವ ಸಕ್ಕರೆ ಕಾರ್ಖಾನೆಗೆ ಮಂಜೂರಾಗಿರುವ 20 ಮೆ.ವ್ಯಾ ಸಾಮರ್ಥ್ಯದ ಸಹ-ವಿದ್ಯುತ್ ಯೋಜನೆಯಲ್ಲಿ ಸದ್ಯಕ್ಕೆ 15 ಮೆ.ವ್ಯಾ. ಸಾಮರ್ಥ್ಯದ (ಗ್ರಾಸ್) ಹಾಗೂ 8.94 (exportable during season) ಸಾಮರ್ಥ್ಯದ ಸಹ-ವಿದ್ಯುತ್ ಘಟಕವನ್ನು ಸ್ಥಾಪಿಸುವ ಕುರಿತು ಸ್ಥಳ ಪರಿಶೀಲನೆ ಮಾಡಿ ವರದಿಯೊಂದಿಗೆ, ನಿರಾಕ್ಷೇಪಣಾ ಪತ್ರ ನೀಡಬಹುದೆಂಬ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಿ, ಮೆ:: ಶ್ರೀ ಹಾಲಸಿದ್ಧನಾಥ ಸಹಕಾರಿ ಸಕ್ಕರೆ ಕಾರ್ಖಾನೆ ಲಿಮಿಟೆಡ್, ನಿಪ್ಪಾಣಿರವರ ಸಹ-ವಿದ್ಯುತ್ ಯೋಜನೆಯಿಂದ ಉತ್ಪಾದನೆಯಾಗುವ ಎಕ್ಸ್‌ಪೋರ್ಟೆಬಲ್ ವಿದ್ಯುತ್‌ನ್ನು ಪಿಪಿಎ ಮೂಲಕ ಅಥವಾ 3ನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸುವ ಕುರಿತು ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರದ ಆದೇಶ ಸಂಖ್ಯೆ: ಇಎನ್ 53 ಎನ್‌ಸಿಇ 2014,**
**ಬೆಂಗಳೂರು, ದಿನಾಂಕ : 11.08.2014.**

ಮೆ:: ಶ್ರೀ ಹಾಲಸಿದ್ಧನಾಥ ಸಹಕಾರಿ ಸಕ್ಕರೆ ಕಾರ್ಖಾನೆ ಲಿಮಿಟೆಡ್ ರವರ (M/s Shri Halasidhanath Shakari Sakhar Karkhana Ltd) ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಶಂಕರನಂದನಗರ್, ನಿಪ್ಪಾಣಿಯಲ್ಲಿರುವ 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯೊಂದಿಗೆ 15 ಮೆ.ವ್ಯಾ. (ಗ್ರಾಸ್) ಹಾಗೂ 8.94 (exportable during season) ಸಾಮರ್ಥ್ಯದ ಸಹ-ವಿದ್ಯುತ್ ಘಟಕವನ್ನು ಸ್ಥಾಪಿಸಲು ಈ ಕೆಳಗಿನ ನಿಬಂಧನೆಗಳಿಗೊಳಪಟ್ಟು ಸರ್ಕಾರದ **ನಿರಾಕ್ಷೇಪಣೆಯನ್ನು** ನೀಡಲಾಗಿದೆ.

1. ಅಭಿವೃದ್ಧಿದಾರರು ಉತ್ಪಾದಿಸುವ ವಿದ್ಯುತ್‌ನ Evacuation ಗೆ ಸಂಬಂಧಿಸಿದಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು;

--2)

2. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅಂದರೆ, ಅರಣ್ಯ/ಕಂದಾಯ ಇಲಾಖೆ ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
3. ಅಭಿವೃದ್ಧಿದಾರರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮಾರಾಟ ಮಾಡುವ ಕುರಿತು ಸಂಬಂಧಿಸಿದ ಎಸ್ಕಾಂನೊಂದಿಗೆ ವಿದ್ಯುತ್ ಖರೀದಿ ಒಪ್ಪಂದ (ಪಿಪಿಎ) ಅಥವಾ 3ನೇ ವ್ಯಕ್ತಿಗೆ ಮಾರಾಟ ಮಾಡಿಕೊಳ್ಳಲು ಅನುಮತಿಸಿದೆ;
4. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ಕೆ.ಆರ್.ಇ.ಡಿ.ಎಲ್.ಗೆ ಶುಲ್ಕ ಪಾವತಿಸತಕ್ಕದ್ದು;
5. ಯೋಜನೆ ಅನುಷ್ಠಾನ ಕುರಿತು ಅಭಿವೃದ್ಧಿದಾರರು, ಪ್ರತಿ 6 ತಿಂಗಳಿಗೊಮ್ಮೆ ಪ್ರಗತಿ ವರದಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಸಲ್ಲಿಸುವುದು.

ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 080–22034674.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ನೀರಾವರಿ ಇಲಾಖೆ, ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು–9.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು–1.
6 ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.
8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ನವನಗರ, ಹುಬ್ಬಳ್ಳಿ–580 025.
9 ಮೆ:: ಶ್ರೀ ಹಾಲಸಿದ್ದನಾಥ ಸಹಕಾರಿ ಸಕ್ಕರೆ ಕಾರ್ಖಾನೆ ಲಿಮಿಟೆಡ್, ಶಂಕರನಂದನಗರ, ನಿಪ್ಪಾಣಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ–591237.
10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.